# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೆಯ ಅಧಿವೇಶನ

## (ಮುಂದುವರೆದ ಉಪವೇಶನಗಳು)

## <u>ಕಾರ್ಯಕಲಾಪಗಳ ಪಟ್ಟಿ</u>

**ಬುಧವಾರ, ದಿನಾಂಕ: 22ನೇ ನವೆಂಬರ್, 2017**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

**ಅ.** ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂವತ್ತೊಂದನೆಯ ಪಟ್ಟಿ

**ಆ.** **<u>ತಡೆಹಿಡಿಯಲಾದ ಪ್ರಶ್ನೆ:</u>**

(1) ಇಪ್ಪತ್ತಾರನೆಯ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:385(3747)** : **ಮಾನ್ಯ ಕಂದಾಯ ಸಚಿವರು**

(2) ಇಪ್ಪತ್ತಾರನೆಯ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀಮತಿ ತಾರಾಅನೂರಾಧ** ಅವರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:389(3711)** : **ಮಾನ್ಯ ಕಾರ್ಮಿಕ ಸಚಿವರು**

**ಇ.** ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂವತ್ತೊಂದನೆಯ ಪಟ್ಟಿ

### 02. ಗಮನ ಸೆಳೆಯುವ ಸೂಚನೆಗಳು

**ಅ. ಶ್ರೀಮತಿ ಮೋಟಮ್ಮ** ಅವರು ಮೂಡಿಗೆರೆ ಕೇಂದ್ರದಿಂದ ಕಳಸಾ 100 ಕಿ.ಮೀ. ದೂರದಲ್ಲಿದ್ದು, ಜನ ಸಾಮಾನ್ಯರಿಗೆ ಮೂಡಿಗೆರೆ ಕೇಂದ್ರಕ್ಕೆ ಹೋಗಿ ಬರಲು ತೊಂದರೆಯಾಗುತ್ತಿರುವುದರಿಂದ, ಕಳಸಾ ಗ್ರಾಮವನ್ನು ತಾಲ್ಲೂಕೆಂದು ಘೋಷಿಸುವ ಬಗ್ಗೆ **ಮಾನ್ಯ ಕಂದಾಯ ಸಚಿವರ** ಗಮನ ಸೆಳೆಯುವುದು.

**ಆ. ಶ್ರೀ ವಿ. ಸೋಮಣ್ಣ** ಅವರು ಬೆಂಗಳೂರಿನ ಹಂಪಿ ನಗರದ ಒಂದನೇ ಮುಖ್ಯರಸ್ತೆಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯವರು ಹಮ್ಮಿಕೊಂಡಿದ್ದ ಕಾರ್ಯಕ್ರಮಕ್ಕಾಗಿ ಸಂಪೂರ್ಣ ಬಂದ್ ಮಾಡಿದ್ದರಿಂದ, ಸಾರ್ವಜನಿಕರಿಗೆ ತೊಂದರೆಯಾಗಿರುವ ಬಗ್ಗೆ **ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ** ಗಮನ ಸೆಳೆಯುವುದು.

**ಇ. ಶ್ರೀ ಪುಟ್ಟಣ್ಣ** ಅವರು ಬೆಂಗಳೂರಿನ ಮಲ್ಲೇಶ್ವರಂನ 18ನೇ ಕ್ರಾಸ್‌ನಲ್ಲಿರುವ ನಿರ್ಭಯ ಆಸ್ಪತ್ರೆಯಲ್ಲಿ ಗೂಂಡಾಗಳು ದಾಳಿ ನಡೆಸಿ, ಪೀಠೋಪಕರಣಗಳನ್ನು ಧ್ವಂಸಗೊಳಿಸಿದ್ದರ ಹಿನ್ನಲೆಯಲ್ಲಿ ಸದರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ರೋಗಿಗಳಿಗೆ ತೊಂದರೆಯಾಗಿರುವ ಬಗ್ಗೆ **ಮಾನ್ಯ ಗೃಹ** ಸಚಿವರ ಗಮನ ಸೆಳೆಯುವುದು.

.....2

**ಈ. ಶ್ರೀ ಐವನ್ ಡಿ'ಸೋಜಾ** ಅವರು ಮಂಗಳೂರಿನ ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಶಿಕ್ಷಕರ ಕೊರತೆ, ಕಟ್ಟಡ ದುರಸ್ಥಿ ಹಾಗೂ ಹಾಸ್ಟೆಲ್‌ನ ಮೂಲ ಸೌಲಭ್ಯಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ** ಸಚಿವರ ಗಮನ ಸೆಳೆಯುವುದು.

## ೦೩. ನಿಯಮ ೩೩೦ರ ಮೇರೆಗೆ

**ಅ. ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೌಕರರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ, ಪಿ.ಎಫ್., ಇ.ಎಸ್.ಐ. ಸೌಲಭ್ಯ, ಬಾಪೂಜಿ ಸೇವಾ ಕೇಂದ್ರಗಳಿಗೆ ಕಂಪ್ಯೂಟರ್ ಒದಗಿಸುವುದು, ಈ-ಸ್ವತ್ತುಗಳಲ್ಲಿನ ಗೊಂದಲ ನಿವಾರಣೆ, ಪಿ.ಡಿ.ಓ. ಹುದ್ದೆಗಳನ್ನು ಮೇಲ್ದರ್ಜೆಗೇರಿಸುವುದು ಇತ್ಯಾದಿ ಆಡಳಿತಾತ್ಮಕ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)**

**ಆ. ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರು ಸರ್ಕಾರಿ ಆದೇಶ ಸಂಖ್ಯೆ:ಸಕಇ/127/ಬಿಸಿಎ/2005ರ ರೀತ್ಯಾ ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದವರಿಗೆ ಪ್ರವರ್ಗ-1ರ ಪ್ರಮಾಣ ಪತ್ರ ನೀಡುವಾಗ ಜನಾಂಗವನ್ನು ನಮೂದಿಸಿ ಕೊಡುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)**

**ಇ. ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ** ಅವರು ಉಡುಪಿ ಜಿಲ್ಲೆಯಲ್ಲಿ ಇಪ್ಪತ್ತಾರು ಕೆ.ಎಸ್.ಆರ್.ಟಿ.ಸಿ. ಬಸ್‌ಗಳನ್ನು ತಾಂತ್ರಿಕ ದೋಷದಿಂದಾಗಿ ರದ್ದು ಮಾಡಲಾಗಿರುವ ಕಾರಣ, ಅಂದಾಜು 1020 ರಿಯಾಯಿತಿ ಪಾಸ್‌ಗಳನ್ನು ಹೊಂದಿರುವ ವಿದ್ಯಾರ್ಥಿಗಳು ಅನುಭವಿಸುತ್ತಿರುವ ತೊಂದರೆಯ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಾರಿಗೆ ಸಚಿವರು)**

**ಈ. ಶ್ರೀ ರಮೇಶ್ ಬಾಬು** ಅವರು ಸಾರಿಗೆ ಇಲಾಖೆಯಲ್ಲಿ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರು ಹಾಗೂ ಅವರ ಸಹೋದರರಾದ ಬ್ರೇಕ್ ಇನ್ಸ್‌ಪೆಕ್ಟರ್‌ರವರು ತಮ್ಮ ಸರ್ಕಾರಿ ನೌಕರಿಯನ್ನು ನಿರ್ವಹಿಸದೆ ಸಾರಿಗೆ ಸಚಿವರ ಹೆಸರನ್ನು ಬಳಸಿಕೊಂಡು ನೂರಾರು ಕೋಟಿ ರೂಪಾಯಿಗಳ ಆಸ್ತಿಯನ್ನು ಅಕ್ರಮವಾಗಿ ಗಳಿಸಿರುವ ಬಗ್ಗೆ ಸಮಗ್ರ ತನಿಖೆ ನಡೆಸಿ ನಿಯಮಾನುಸಾರ ಕ್ರಮ ಕೈಗೊಳ್ಳುವ ವಿಷಯದ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಾರಿಗೆ ಸಚಿವರು)**

## ೦೪. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**೦1. ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ವಿಧೇಯಕ, 2017**

**ಶ್ರೀ ಹೆಚ್. ಆಂಜನೇಯ** (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ "**ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ವಿಧೇಯಕ**"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

...3

**೦೨. ಪ್ರಾಣಿಗಳಿಗೆ ಹಿಂಸಾಚಾರ ಮಾಡುವುದನ್ನು ತಡೆಗಟ್ಟುವ (ಕರ್ನಾಟಕ ಎರಡನೇ ತಿದ್ದುಪಡಿ) ವಿಧೇಯಕ, 2017**

**ಶ್ರೀ ಎ. ಮಂಜು** (ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ "**ಪ್ರಾಣಿಗಳಿಗೆ ಹಿಂಸಾಚಾರ ಮಾಡುವುದನ್ನು ತಡೆಗಟ್ಟುವ (ಕರ್ನಾಟಕ ಎರಡನೇ ತಿದ್ದುಪಡಿ) ವಿಧೇಯಕ**"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**೦೩. ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ವಿಧೇಯಕ, 2017**

**ಶ್ರೀ ಸಿದ್ಧರಾಮಯ್ಯ** (ಮಾನ್ಯ ಮುಖ್ಯಮಂತ್ರಿಯವರು ಹಾಗೂ ಹಣಕಾಸು ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ "**ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ವಿಧೇಯಕ**"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**